<u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1105** |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಶಾಂತಾರಾಮ್ ಬುಡ್ನ ಸಿದ್ಧಿ<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | **17.03.2025** |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಳೆದ 2 ವರ್ಷಗಳಿಂದ ಸರ್ಕಾರವು ಅನೇಕ ಬಾರಿ ರೇಷನ್ ಕಾರ್ಡ್‌ನಲ್ಲಿ ಹೆಸರು ತಿದ್ದುಪಡಿಗೆ ನೋಂದಣಿಗೆ ತಿದ್ದುಪಡಿಗಳಿಗೆ ಅವಕಾಶ ಮಾಡಿಕೊಟ್ಟಿದ್ದು, ಆದರೆ ಹೊಸ ರೇಷನ್ ಕಾರ್ಡ್ ಪಡೆಯಲು ಕಳೆದ ಎರಡು ವರ್ಷಗಳಲ್ಲಿ ಒಂದೆರಡು ದಿನ ಮಾತ್ರ ಅವಕಾಶ ಕೊಟ್ಟಿದ್ದು ಇದರಿಂದ ರಾಜ್ಯದ್ಯಂತ ಅನೇಕ ಬಡ ಕುಟುಂಬಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೊಸ ರೇಷನ್ ಕಾರ್ಡ್‌ಗೆ ಅರ್ಜಿ ಹಾಕಲು ಅವಕಾಶ ನೀಡದೇ ಇರುವುದಕ್ಕೆ ಕಾರಣಗಳೇನು; | ಕರ್ನಾಟಕ ರಾಜ್ಯದಲ್ಲಿ ಒಟ್ಟಾರೆ ಅಂತ್ಯೋದಯ ಅನ್ನ ಯೋಜನೆ **(AAY)** ಮತ್ತು ಆದ್ಯತಾ ಪಡಿತರ ಚೀಟಿ **(PHH)** ಸೇರಿ **1,28,45,734** ಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತವೆ. ಕೇಂದ್ರ ಸರ್ಕಾರದಿಂದ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ **2013** ರಡಿ ಕರ್ನಾಟಕ ರಾಜ್ಯದಲ್ಲಿ **4,01,93,000** ಫಲಾನುಭವಿಗಳಿಗೆ ಪಡಿತರ ವಿತರಿಸಲು ಗುರಿಯನ್ನು ನಿಗಧಿಪಡಿಸಲಾಗಿರುತ್ತದೆ. ಆದರೆ ರಾಜ್ಯದಲ್ಲಿ **4,50,59,460** ಫಲಾನುಭವಿಗಳಿಗೆ ಆಹಾರ ಧಾನ್ಯವನ್ನು ವಿತರಿಸಲಾಗುತ್ತಿದೆ. ಆದ್ದರಿಂದ ಈಗಾಗಲೇ ಪಿ.ಹೆಚ್.ಹೆಚ್ ಪಡಿತರ ಚೀಟಿ ಪಡೆದಿರುವವರಲ್ಲಿ ಅನರ್ಹರನ್ನು ಪತ್ತೆ ಹಚ್ಚುವ ಕಾರ್ಯವು ನಿರಂತರವಾಗಿ ನಡೆಯುತ್ತಿದ್ದು ಅನರ್ಹ ಪಡಿತರ ಚೀಟಿಯನ್ನು ರದ್ದು ಪಡಿಸಿದ್ದಲ್ಲಿ ಅಷ್ಟೇ ಪ್ರಮಾಣದ ಹೊಸ ಪಡಿತರ ಚೀಟಿ ನೀಡಲು ಅವಕಾಶವಿರುತ್ತದೆ.<br>1. ತುರ್ತು ವೈದ್ಯಕೀಯ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಅರ್ಹರಿಗೆ ಆದ್ಯತಾ ಪಡಿತರ ಚೀಟಿ ನೀಡಲು ಹಾಗೂ ಪಡಿತರ ಚೀಟಿಯಲ್ಲಿನ ಹೆಸರು ಸೇರ್ಪಡೆ/ತಿದ್ದುಪಡಿಗೆ ಅವಕಾಶ ಕಲ್ಪಿಸಲಾಗಿದೆ.<br>2. ಇ-ಶ್ರಮ್ ನೊಂದಾಯಿತ ಕಾರ್ಮಿಕರಿಗೆ ಹಾಗೂ ಬುಡಕಟ್ಟು ಜನಾಂಗದವರಿಗೆ ಹೊಸ ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| ಆ | ಒಂದೇ ಮನೆಯಲ್ಲಿ ವಾಸವಿದ್ದ ಕುಟುಂಬಗಳು ವೈವಾಹಿಕ ನಂತರ, ಅಥವಾ ಸದಸ್ಯರ ಇನ್ನಿತರ ಕಾರಣಗಳಿಂದ ಬೇರೆ ಬೇರೆ ಮನೆಗಳಲ್ಲಿ ವಾಸವಿದ್ದರೂ ರೇಷನ್ ಕಾರ್ಡ್ ಪಡೆಯಲು ಅವಕಾಶ ಇದಲ್ಲದಿರುವುದರಿಂದ ಹೊಸ ರೇಷನ್ ಕಾರ್ಡ್‌ಗಳನ್ನು ವಿತರಿಸಲು ಸರ್ಕಾರದ ಮುಂದಿನ ಕ್ರಮಗಳೇನು? (ವಿವರ ನೀಡುವುದು) | ಒಂದೇ ಮನೆಯಲ್ಲಿ ವಾಸವಿದ್ದು ಕುಟುಂಬಗಳು ವೈವಾಹಿಕ ನಂತರ ಅಥವಾ ಸದಸ್ಯರ ಇನ್ನಿತರ ಕಾರಣಗಳಿಂದ ಬೇರೆ ಬೇರೆ ಮನೆಗಳಲ್ಲಿ ವಾಸವಿದ್ದರೆ ಪಡಿತರ ಚೀಟಿಯಿಂದ ಹೆಸರು ತೆಗೆಸಲು ಹಾಗೂ ಅರ್ಹ ಸದಸ್ಯರನ್ನು ಸೇರ್ಪಡೆಗೊಳಿಸಲು, ತಿದ್ದುಪಡಿ ಕೋರಿಕೆಯನ್ನು ಆನ್‌ಲೈನ್‌ನಲ್ಲಿ ಸಲ್ಲಿಸಲು ಅವಕಾಶವಿದ್ದು, ಆನ್‌ಲೈನ್‌ನಲ್ಲಿ ಸ್ವೀಕೃತವಾದ ಅರ್ಜಿಗಳನ್ನು ನಿಯಾಮಾನುಸಾರ ಪರಿಶೀಲಿಸಿ ಕ್ರಮಕೈಗೊಳ್ಳಲಾಗುತ್ತಿದೆ. |

ಇ- ಆನಾಸ 97 ಡಿಆರ್‌ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು